ಅಜಯ್ ಸೇಠ್, ಭಾ.ಆ.ಸೇ.
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಶಿಕ್ಷಣ ಇಲಾಖೆ
(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)

ದೂರವಾಣಿ : ಕಛೇರಿ : 080-22257334
ಫ್ಯಾಕ್ಸ್ : 080-22385545
6ನೇ ಮಹಡಿ, ಬಹುಮಹಡಿಗಳ ಕಟ್ಟಡ
ಗೇಟ್ ನಂ. 2, ಡಾ|| ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು – 560 001
E-mail: prsprim-edu@karnataka.gov.in

ಅ.ಸ.ಪ.ಸಂಖ್ಯೆ: ಸಿ1.SSLC.ಮಾ/ಏ2016.ಪ.ವ್ಯ.189/2015-16 ದಿನಾಂಕ: 19ನೇ ಫೆಬ್ರವರಿ 2016

**ವಿಷಯ:** ಮಾರ್ಚ್/ಏಪ್ರಿಲ್ 2016ರ ಪಿ.ಯು.ಸಿ ಹಾಗೂ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಜಿಲ್ಲಾಧಿಕಾರಿಗಳ ಮಾರ್ಗದರ್ಶನ/ ಸಲಹೆಯ ಮುಖಾಂತರ ಯಶಸ್ವಿಗೊಳಿಸುವ ಬಗ್ಗೆ.

*****

2015-16ನೇ ಸಾಲಿನ ಪಿ.ಯು.ಸಿ. ಪರೀಕ್ಷೆಯು ದಿನಾಂಕ: 11.03.2016 ರಿಂದ 28.03.2016ರವರೆಗೆ ಹಾಗೂ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ದಿನಾಂಕ:30.03.2016 ರಿಂದ ದಿನಾಂಕ: 13.04.2016ರವರೆಗೆ ನಡೆಸಲಾಗುತ್ತಿದೆ. ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳ ಪಟ್ಟಿಯನ್ನು ಮಾಹಿತಿಗಾಗಿ ಈ ಪತ್ರದೊಂದಿಗೆ ಅಡಕಗೊಳಿಸಿದೆ. ಪಿ.ಯು.ಸಿ. ಹಾಗೂ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಿರ್ವಹಿಸುವಲ್ಲಿ ಕೆಳಕಂಡ ಅಂಶಗಳ ಬಗ್ಗೆ ಪರಿಶೀಲನೆಯನ್ನು ಮಾಡಬೇಕಾಗಿರುತ್ತದೆ.

- ಜಿಲ್ಲೆಯ ಉಪನಿರ್ದೇಶಕರು (ಪ.ಪೂ.ಶಿ), ಉಪನಿರ್ದೇಶಕರು(ಆಡಳಿತ), ಉಪನಿರ್ದೇಶಕರು(ಅಭಿವೃದ್ಧಿ), ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಸಭೆ ಕರೆದು ಪರೀಕ್ಷಾ ಪೂರ್ವ ಸಿದ್ಧತೆಯ ಪರಿಶೀಲನೆಯನ್ನು ತಾವು ಮಾಡಬೇಕಾಗಿದೆ.
- ಪರೀಕ್ಷಾ ಕೇಂದ್ರಗಳಲ್ಲಿ ಪ್ರಮುಖವಾಗಿ ಪೀಠೋಪಕರಣ, ಆಸನ ವ್ಯವಸ್ಥೆ, ವಿಚಕ್ಷಣದಳ, ಸ್ಥಾನಿಕ ಜಾಗೃತದಳಗಳನ್ನು ನೇಮಿಸಿರುವ ಬಗ್ಗೆ ಪರಿಶೀಲಿಸುವುದು.
- ಪಿ.ಯು.ಸಿ.ಗೆ ಸಂಬಂಧಿಸಿದಂತೆ ಪಿ.ಯು.ಮಂಡಳಿಯಿಂದ ಹಾಗೂ ಎಸ್.ಎಸ್.ಎಲ್.ಸಿ.ಗೆ ಸಂಬಂಧಿಸಿದಂತೆ ಜಿಲ್ಲಾ ಉಪನಿರ್ದೇಶಕರ ಕಛೇರಿಯಿಂದ ಪ್ರಶ್ನೋತ್ತರ ಪತ್ರಿಕೆಗಳನ್ನು ಜಿಲ್ಲೆ ಹಾಗೂ ತಾಲ್ಲೂಕು ಖಜಾನೆಗಳಲ್ಲಿ ಠೇವಣಿ ಮಾಡಲು ಸೂಕ್ತ ಮಾರ್ಗಾಧಿಕಾರಿಗಳನ್ನು ನೇಮಿಸುವುದು. ಈ ಕಾರ್ಯಕ್ಕಾಗಿ ಬಳಸುವ ವಾಹನಗಳಿಗೆ ಅಗತ್ಯವಾದ ಪೋಲೀಸ್ ಬಂದೋಬಸ್ತ್ ನೀಡಲು ಕ್ರಮ ತೆಗೆದುಕೊಳ್ಳುವುದು. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೋತ್ತರ ಪತ್ರಿಕೆಗಳನ್ನು ಸರಿಯಾದ ಸಮಯದಲ್ಲಿ ಮಾರ್ಗನಕ್ಷೆಯ ಪ್ರಕಾರ ಮಾರ್ಗಾಧಿಕಾರಿಗಳು ತಲುಪಿಸುವ ಬಗ್ಗೆ ಪರಿಶೀಲಿಸುವುದು.
- ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ.ಟಿ.ವಿ. ಕ್ಯಾಮೆರಾಗಳನ್ನು ಅಳವಡಿಸಿರುವ ಬಗ್ಗೆ ಅಗತ್ಯವಾದ ಕ್ರಮಗಳು ಹಾಗೂ ಪರೀಕ್ಷಾ ಅವ್ಯವಹಾರಗಳು ನಡೆಯದಂತೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿರುತ್ತದೆ. ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಇತರೆ ಇಲಾಖೆಯ ಎಲ್ಲಾ ಅಧಿಕಾರಿಗಳ ಸೇವೆಯನ್ನು ಜಾಗೃತದಳಗಳಿಗೆ ಬಳಸಿಕೊಳ್ಳಲು ಕ್ರಮವಹಿಸುವುದು.
- ಪರೀಕ್ಷೆಯಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಪರೀಕ್ಷಾ ಅವ್ಯವಹಾರಗಳನ್ನು ತಡೆಗಟ್ಟಲು ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಇತರೆ ಇಲಾಖೆಯ ಒಬ್ಬ ಅಧಿಕಾರಿಯನ್ನು ವೀಕ್ಷಕರನ್ನಾಗಿ ನೇಮಿಸಲು ಕ್ರಮವಹಿಸುವುದು.
- ಪರೀಕ್ಷೆ ನಡೆಯುವ ದಿನಗಳಂದು ತಾಲ್ಲೂಕು ಹಾಗೂ ಜಿಲ್ಲಾ ಹಂತದಲ್ಲಿನ ಇತರೆ ಇಲಾಖೆಯ ಅಧಿಕಾರಿಗಳನ್ನು ಪರೀಕ್ಷೆ ಪ್ರಾರಂಭವಾಗುವ ಸಮಯದಿಂದ ಮುಕ್ತಾಯವಾಗುವವರೆಗೆ ಪರೀಕ್ಷಾ ಕೇಂದ್ರದಲ್ಲಿಯೇ ಇರುವಂತೆ ಜಾಗೃತ ದಳದ ಅಧಿಕಾರಿಗಳನ್ನಾಗಿ ನೇಮಿಸುವುದು ಹಾಗೂ ಅಧಿಕಾರಿಗಳನ್ನು ನೇಮಿಸುವಲ್ಲಿ ಸೂಕ್ತ ವೇಳಾಪಟ್ಟಿ ಸಿದ್ಧಪಡಿಸಿ ಆದೇಶಗಳನ್ನು ನೀಡಲು ಕ್ರಮವಹಿಸುವುದು.

- ಆಯಾಯ ಪರೀಕ್ಷಾ ದಿನದಂದು ಪರೀಕ್ಷೆ ಮುಗಿದ ನಂತರ ಪಿ.ಯು.ಸಿ.ಗೆ ಸಂಬಂಧಿಸಿದಂತೆ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಕೇಂದ್ರಗಳಿಗೆ ರವಾನಿಸಲು ಹಾಗೂ ಎಸ್.ಎಸ್.ಎಲ್.ಸಿ.ಗೆ ಸಂಬಂಧಿಸಿದಂತೆ ಪ್ರಶ್ನೋತ್ತರ ಪತ್ರಿಕೆಗಳನ್ನು ಜಿಲ್ಲಾ ಕೇಂದ್ರದ ಭದ್ರತಾ ಕೊಠಡಿಯಲ್ಲಿ ಶೇಖರಿಸಿಡಲು ಸುವ್ಯವಸ್ಥಿತವಾದ ಶಾಲಾ ಕಟ್ಟಡ ಆಯ್ಕೆ ಮಾಡಿಕೊಂಡಿರುವುದರ ಬಗ್ಗೆ ಹಾಗೂ ಪ್ರಶ್ನೋತ್ತರ ಪತ್ರಿಕೆಗಳನ್ನು ಸುರಕ್ಷತೆಯ ನಿರ್ವಹಣೆ ಮಾಡಲು ಪೊಲೀಸ್ ವ್ಯವಸ್ಥೆ ಮಾಡಿಕೊಂಡಿರುವ ಬಗ್ಗೆ ಪರಿಶೀಲಿಸುವುದು.

ಸುವ್ಯವಸ್ಥಿತವಾಗಿ ಪರೀಕ್ಷೆ ನಡೆಯುವಲ್ಲಿ ತಮ್ಮ ಅಮೂಲ್ಯ ಸಲಹೆ ಹಾಗೂ ಮಾರ್ಗದರ್ಶನ ನೀಡುವುದು ಅವಶ್ಯಕತೆ ಇರುತ್ತದೆ. ಪರೀಕ್ಷಾ ಪೂರ್ವ ಸಿದ್ದತೆ ಬಗ್ಗೆ ತಮ್ಮೊಂದಿಗೆ ಚರ್ಚಿಸಲು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿಲ್ಲಾ ಖಜಾನಾಧಿಕಾರಿಗಳು, ಉಪನಿರ್ದೇಶಕರು(ಪ.ಪೂ.ಶಿ), ಉಪನಿರ್ದೇಶಕರು(ಆಡಳಿತ), ಉಪನಿರ್ದೇಶಕರು(ಅಭಿವೃದ್ಧಿ) ಹಾಗೂ ಜಿಲ್ಲಾ ಎಸ್.ಎಸ್.ಎಲ್.ಸಿ. ನೋಡಲ್ ಅಧಿಕಾರಿಗಳೊಂದಿಗೆ **ದಿನಾಂಕ: 26.02.2016ರ ಶುಕ್ರವಾರ ಬೆಳಗ್ಗೆ 10.30 ರಿಂದ ಮಧ್ಯಾಹ್ನ 1.30ರವರೆಗೆ** ವೀಡಿಯೋ ಕಾನ್ಫರೆನ್ಸ್ ನಿಗದಿಗೊಳಿಸಿದೆ. ಜಿಲ್ಲಾಧಿಕಾರಿಗಳ ಕಛೇರಿಯ ವೀಡಿಯೋ ಕಾನ್ಫರೆನ್ಸ್ ಸ್ವೀಕೃತಿ ಕೇಂದ್ರದಲ್ಲಿ ಖುದ್ದಾಗಿ ಹಾಜರಾಗಲು ಕೋರಿದೆ.

ಈ ಕಛೇರಿಯಿಂದ ಪರೀಕ್ಷಾ ಸಂದರ್ಭದಲ್ಲಿ ಏನಾದರೂ ಮಾಹಿತಿಗಳು ತಮಗೆ ಅವಶ್ಯವಿದ್ದಲ್ಲಿ ದಯವಿಟ್ಟು ತಿಳಿಸಿ ಹಾಗೂ ಪರೀಕ್ಷಾ ಮಂಡಳಿಯ ಜೊತೆ ನಿರಂತರ ಸಂಪರ್ಕವನ್ನು ಇಟ್ಟುಕೊಂಡು ಪರೀಕ್ಷಾ ವಿದ್ಯಮಾನಗಳನ್ನು ವರದಿ ಮಾಡಲು ಕೋರುತ್ತೇನೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,